ಒ. ಎಸ್. ನಂ. 247/2019

ಪಿಡಬ್ಲೂ-1

ದಿನಾಂಕಃ 23.10.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ಮಾಡಿಸಲಾಯಿತು.

**ಮುಂದುವರೆದ ಪಾಟೀ ಸವಾಲು :- ಶ್ರೀ. ಪ್ರತಿವಾದಿ ಪರ ವಕೀಲರಿಂದಃ-**

ನಾನು ದಾವಾ ಸ್ವತ್ತಿನ ಸ್ವಾಧೀನದಲ್ಲಿ ಇಲ್ಲ ಎಂದರೆ ಸರಿಯಲ್ಲ. ಕಳೆದ ವಾರ ಪ್ರತಿವಾದಿ ವಿರದ್ಧ ದಾವಾ ಸ್ವತ್ತಿಗೆ ಬಿಡುತ್ತಿಲ್ಲ ಎಂದು ದೂರು ಸಲ್ಲಿಸಿರುತ್ತೇನೆ ಎಂದರೆ ತೊಂದರೆ ಕೊಟ್ಟಿದ್ದಕ್ಕೆ ಸಲ್ಲಿಸಿರುತ್ತೇನೆ ಎಂದು ನುಡಿಯುತ್ತಾರೆ. ದಾವಾ ಸ್ವತ್ತಿನ ನಕಾಶೆಯನ್ನು ಹಾಜರುಪಡಿಸಿರುತ್ತೇನೆ. ಸರ್ವೆ ನಂಬರ್ 21 ರಲ್ಲಿ ಒಟ್ಟು 3 ಎಕರೆ 1 ಗುಂಟೆ ಇದ್ದು, ಅದರಲ್ಲಿ 1 ಎಕರೆ 10 ಗುಂಟೆ ಖರೀದಿ ಮಾಡಿರುತ್ತೇನೆ. ಸದರಿ ಒಟ್ಟು ವಿಸ್ತೀರ್ಣ ದಲ್ಲಿ ಪ್ರತಿವಾದಿಯೇ ಸ್ವಾಧೀನ ಇದ್ದು, ವ್ಯವಸಾಯ ಮಾಡುತ್ತಿದ್ದಾರೆ ಎಂದರೆ ಸರಿಯಲ್ಲ. ದಿನಾಂಕ 10.07.2019 ರಂದು ನಾನು ದಾವಾ ಸ್ವತ್ತಿನ ಬಳಿ ಹೋಗಿರುವುದಿಲ್ಲ ಹಾಗಾಗಿ ಪ್ರತಿವಾದಿಗಳು ತೊಂದರೆ ಕೊಡುವ ಪ್ರಶ್ನೆ ಉದ್ಭವಿಸುವುದಿಲ್ಲ ಎಂದರೆ ಸರಿಯಲ್ಲ. ನಾನು ದಾವಾ ಸ್ವತ್ತಿನಲ್ಲಿ ಸ್ವಾಧೀನ ಇದ್ದೇನೆ ಎಂದು ತೋರಿಸಲು ಕಂದಾಯ ಅಧಿಕಾರಿಗಳಿಂದ ಸ್ವಾಧೀನ ಪ್ರಮಾಣ ಪತ್ರ ಹಾಜರುಪಡಿಸಿಲ್ಲ ಎಂದರೆ ಪಹಣಿ ಮ್ಯುಟೇಷನ್, ಕಂದಾಯ ರಸೀದಿ ಹಾಜರುಪಡಿಸಿರುತ್ತೇನೆ ಎಂದು ನುಡಿಯುತ್ತಾರೆ. ನಾನು ದಾವಾ ಸ್ವತ್ತಿನಲ್ಲಿ ವ್ಯವಸಾಯ ಮಾಡುತ್ತಿದ್ದೇನೆ ಎಂದು ತೋರಿಸಲು ಛಾಯಾಚಿತ್ರಗಳನ್ನು ಹಾಜರುಪಡಿಸಿಲ್ಲ. ಪ್ರತಿವಾದಿಗಳು ನನ್ನ ಸ್ವಾಧೀನಕ್ಕೆ ಅಡ್ಡಿ ಪಡಿಸಿರುತ್ತಾರೆ ಎಂದು ತೋರಿಸಲು ಛಾಯಾಚಿತ್ರಗಳನ್ನು ಹಾಜರುಪಡಿಸಿಲ್ಲ. ಪ್ರತಿವಾದಿಗಳು ಯಾವುದೇ ತೊಂದರೆ ನೀಡಿದಿದ್ದರೂ ಸಹ ಸುಳ್ಳು ದಾವೆ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಣಗೊಳಿಸಲಾಯಿತು)

**2 ನೇ ಹೆಚ್ಚುವರಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹೆಚ್.ಡಿ. ಕೋಟೆ**